ಯುಕೆ ಯಿಂದ ವಿಮಾನ ಬರಲು ಕೇಂದ್ರ ಸರ್ಕಾರ ಅನುಮತಿ:

ಕೇಂದ್ರ ಸರ್ಕಾರದ ಸೂಚನೆಯಂತೆ ಯುಕೆಯಿಂದ ಬರುತ್ತಿರುವ ಪ್ರಯಾಣಿಕರಿಗೆ ಶನಿವಾರದಿಂದ ಮತ್ತೆ ವಿಮಾನಗಳು ಆರಂಭವಾಗಿದೆ. ಬೆಂಗಳೂರಿಗೆ ಇಂದು ರಾತ್ರಿ ಒಂದು ವಿಮಾನ ಬರುತ್ತಿದೆ. ಕೇಂದ್ರ ಸರ್ಕಾರ ಈ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸಿದೆ. ಮಾರ್ಗಸೂಚಿಗಳ ಪ್ರಕಾರ 72 ಗಂಟೆ ಮೊದಲು ಆರ್.ಟಿ.ಪಿ.ಸಿ.ಆರ್ ಪರೀಕ್ಷೆ ಮಾಡಿಸಿಕೊಂಡು ನೆಗೆಟಿವ್ ಸರ್ಟಿಫಿಕೇಟ್ ಇದ್ದವರಿಗೆ ಮಾತ್ರ ವಿಮಾನದಲ್ಲಿ ಬರಲು ಅನುಮತಿ ನೀಡಲಿದ್ದಾರೆ. ವಿಮಾನ ನಿಲ್ದಾಣಕ್ಕೆ ಬಂದಿಳಿದ ನಂತರ ಮತ್ತೆ ಆರ್.ಟಿ.ಪಿ.ಸಿ.ಆರ್ ಪರೀಕ್ಷೆ ಮಾಡಲಾಗುತ್ತದೆ. ರಿಸಲ್ಟ್ ಬರುವವರೆಗೆ ಯಾರನ್ನೂ ಹೊರಗಡೆ ಬಿಡುವುದಿಲ್ಲ. ವಿಮಾನ ನಿಲ್ದಾಣದ ಬಳಿ ಪಾಸಿಟಿವ್ ಬಂದವರಿಗೆ ಸಾಂಸ್ಥಿಕ ಗೃಹಬಂಧನದಲ್ಲಿರಿಸಲಾಗುತ್ತದೆ. ಜೊತೆಗೆ ಪಾಸಿಟಿವ್ ಬಂದವರ ಅಕ್ಕ-ಪಕ್ಕ, ಹಿಂದೆ-ಮುಂದೆಯಿರುವ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಿತರನ್ನು ಗುರುತಿಸಿ ಸಾಂಸ್ಥಿಕ ಗೃಹಬಂಧನದಲ್ಲಿರಿಸಲಾಗುತ್ತದೆ. ಅಲ್ಲದೆ ನೆಗೆಟಿವ್ ಬಂದವರು ಮನೆಯಲ್ಲಿಯೇ 14 ದಿನ ಗೃಹಬಂಧನದಲ್ಲಿರಬೇಕು.

ಗೃಹಬಂಧನದಲ್ಲಿರುವವರಿಗೆ ಪಾಸಿಟಿವ್ ಬಂದರೆ ವಿಮಾನದಲ್ಲಿ ಸೀಟ್ ಅಕ್ಕ-ಪಕ್ಕ, ಹಿಂದೆ-ಮುಂದೆಯಿರುವ ಪ್ರಾಥಮಿಕ ಹಾಗೂ ದ್ವಿತೀಯ ಸಂಪರ್ಕಿತರನ್ನು ಗುರುತಿಸಿ ಸಾಂಸ್ಥಿಕ ಗೃಹಬಂಧನದಲ್ಲಿರಿಸಲು ವ್ಯವಸ್ಥೆ ಮಾಡಲಾಗಿರುತ್ತದೆ. ಗೃಹಬಂಧನದಲ್ಲಿರುವವರ ಮೇಲೆ ಪಾಲಿಕೆ ಸಿಬ್ಬಂದಿ ನಿಗಾವಹಿಸಲಿದ್ದಾರೆ.